# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು - 572 103

ಸಂಖ್ಯೆ:ತುವಿ:ಶೈವಿ:ಬಿ.ಇಡಿ:2020-21: 1164 ದಿನಾಂಕ:13.08.2020

## ಸುತ್ತೋಲೆ

ವಿಷಯ:ಬಿ.ಇಡಿ ಕಾಲೇಜುಗಳ ಬೋಧಕರ ಕರಡು ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುತ್ತಿರುವ ಕುರಿತು.

ಉಲ್ಲೇಖ: 1. ಈ ಕಚೇರಿ ಸುತ್ತೋಲೆ ಸಂಖ್ಯೆ:ತುವಿ:ಶೈವಿ:ಬಿ.ಇಡಿ:2020-21//61 ದಿನಾಂಕ:02.05.2020
2. ಅಧ್ಯಕ್ಷರು, ಸ್ನಾತಕ ಶಿಕ್ಷಣ ಅಧ್ಯಯನ ಮಂಡಳಿ ಇವರ ಪತ್ರ ದಿನಾಂಕ:28.07.2020
3. ಮಾನ್ಯ ಕುಲಪತಿಗಳ ಅನುಮೋದನೆ (ಕಂಡಿಕೆ-156) ದಿನಾಂಕ: 13.08.2020

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಶ್ವವಿದ್ಯಾನಿಲಯದ ಸಂಯೋಜಿತ ಬಿ.ಇಡಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕರ ಕರಡು ಜೇಷ್ಠತಾ ಪಟ್ಟಿಯನ್ನು ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸಿ, ಸದರಿ ಜೇಷ್ಠತಾ ಪಟ್ಟಿಯ ಬಗ್ಗೆ ಶಿಕ್ಷಣ ಮಹಾವಿದ್ಯಾಲಯಗಳ ಬೋಧಕ ಸಿಬ್ಬಂದಿಗಳಿಂದ ಏನಾದರೂ ಆಕ್ಷೇಪಣೆಗಳಿದ್ದಲ್ಲಿ ಪೂರಕ ದಾಖಲೆಗಳೊಂದಿಗೆ ವಿಶ್ವವಿದ್ಯಾನಿಲಯಕ್ಕೆ ದಿ:16.05.2020 ರೊಳಗೆ ಸಲ್ಲಿಸಲು ಉಲ್ಲೇಖ(01)ರ ಸುತ್ತೋಲೆಯಲ್ಲಿ ಸೂಚಿಸಲಾಗಿರುತ್ತದೆ.

ಅದರಂತೆ, ಸ್ವೀಕೃತವಾದ ಆಕ್ಷೇಪಣೆಗಳನ್ನು ಪರಿಶೀಲಿಸಿ, ತುರ್ತಾಗಿ ಪರಿಷ್ಕೃತ ಜೇಷ್ಠತಾ ಪಟ್ಟಿಯನ್ನು ಸಲ್ಲಿಸುವಂತೆ, ಅಧ್ಯಕ್ಷರು, ಸ್ನಾತಕ ಶಿಕ್ಷಣ ಮಂಡಳಿ ಇವರಿಗೆ ತಿಳಿಸಲಾಗಿದ್ದು, ಸದರಿಯವರು ಉಲ್ಲೇಖ(02)ರ ತಮ್ಮ ಪತ್ರದೊಂದಿಗೆ ಪರಿಷ್ಕೃತ ಜೇಷ್ಠತಾ ಪಟ್ಟಿಯನ್ನು ಸಲ್ಲಿಸಿರುತ್ತಾರೆ.

ಸದರಿ ಕರಡು ಪರಿಷ್ಕೃತ ಜೇಷ್ಠತಾ ಪಟ್ಟಿಯನ್ನು ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದ್ದು, ಸದರಿ ಜೇಷ್ಠತಾ ಪಟ್ಟಿಯ ಬಗ್ಗೆ ಶಿಕ್ಷಣ ಮಹಾವಿದ್ಯಾಲಯಗಳ ಬೋಧಕ ಸಿಬ್ಬಂದಿಗಳಿಂದ ಏನಾದರೂ ಆಕ್ಷೇಪಣೆಗಳಿದ್ದಲ್ಲಿ ಪೂರಕ ದಾಖಲೆಗಳೊಂದಿಗೆ ದಿ:22.08.2020 ರೊಳಗೆ ವಿಶ್ವವಿದ್ಯಾನಿಲಯಕ್ಕೆ ನೇರವಾಗಿ ಅಥವಾ ವಿಶ್ವವಿದ್ಯಾನಿಲಯದ ಅಧಿಕೃತ ಮಿಂಚಂಚೆ **tumkuruniversity2004@gmail.com** ಗೆ ಕಳುಹಿಸಲು ಈ ಮೂಲಕ ತಿಳಿಸಲಾಗಿದೆ.

ಸೂಚಿತ ದಿನಾಂಕದ ನಂತರ ತಮ್ಮ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲವೆಂದು ಹಾಗೂ ಪೂರಕ ದಾಖಲೆಗಳಿಲ್ಲದ ಅಥವಾ ಸ್ಪಷ್ಟವಾಗಿಲ್ಲದ ಆಕ್ಷೇಪಣೆಗಳನ್ನು ಮಾನ್ಯ ಮಾಡುವುದಿಲ್ಲವೆಂದು ಈ ಮೂಲಕ ಸೂಚಿಸಲಾಗಿದೆ.

ಕುಲಸಚಿವರು 13/08

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

ಪ್ರಾಂಶುಪಾಲರು, ಎಲ್ಲಾ ಸಂಯೋಜಿತ ಶಿಕ್ಷಣ ಮಹಾವಿದ್ಯಾಲಯಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ತಮ್ಮ ಅಧೀನದ ಎಲ್ಲಾ ಬೋಧಕ ಸಿಬ್ಬಂದಿಗಳ ಗಮನಕ್ಕೆ ತರುವುದು.

ಪ್ರತಿಗಳು:

1. ಮಾನ್ಯ ಕುಲಪತಿಗಳ ಆಪ್ತಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. ಜಾಲತಾಣದಲ್ಲಿ ಪ್ರಕಟಿಸುವುದು.
3. ಕಚೇರಿ ಪ್ರತಿ